ಓ ಎಸ್. ನಂ.171/2023

ಡಿ.ಡಬ್ಲೂ: 2

**ದಿನಾಂಕಃ 06-02-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ ಎಂ.ಹೆಚ್ ವಕೀಲರಿಂದಃ**

**ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಸದರಿ ಸಾಕ್ಷಿಯನ್ನು ಡಿ.ಡಬ್ಲೂ-2 ಎಂದು ಪರಿಗಣಿಸಲಾಯಿತು.**

ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ವೆ ನಂ.123/ಅ ನೇದಕ್ಕೆ ಸಂಬಂಧಿಸಿದ 03 ಕೈಬರಹ ಪಹಣಿಗಳ ದೃಡೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ-4 ರಿಂದ 6 ಎಂದು, ಸರ್ವೆ ನಂ.123/1 ನೇದಕ್ಕೆ ಸಂಬಂಧಿಸಿದ 04 ಕೈಬರಹ ಪಹಣಿಗಳ ದೃಡೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ-7 ರಿಂದ 10 ಎಂದು, ನನ್ನ ಅಜ್ಜನ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ-11 ಎಂದು ಗುರುತಿಸಲಾಯಿತು. ದಾವೆಯನ್ನು ವಜಾ ಮಾಡಬೇಕಾಗಿ ವಿಂನತಿ.

**ಪಾಟೀ ಸವಾಲುಃ ವಾದಿ ಪರ ಶ್ರೀ ಎಸ್.ಎಂ.ಪಿ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,

ಶೋರಾಪುರ.